# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** **ದಿನಾಂಕ: 16.10.2019**

### ಪೂಜ್ಯ ಮಹಾಪೌರರು ರವರಿಂದ ಜಯನಗರ ಶಾಪಿಂಗ್ ಕಾಂಪ್ಲೆಕ್ಸ್ ಹಾಗೂ ಆವರಣದಲ್ಲಿರುವ ವಿವಿಧ ಕಛೇರಿಗಳಿಗೆ ಅನಿರೀಕ್ಷಿತ ತಪಾಸಣೆ:



ಪೂಜ್ಯ ಮಹಾಪೌರರು ರವರು ಬುಧವಾರ ಜಯನಗರ ಶಾಂಪಿಂಗ್ ಕ್ಲಾಂಪೆಕ್ಸ್ ಹಾಗೂ ಸದರಿ ಆವರಣದಲ್ಲಿರುವ ಬೃಹತ್ ನೀರುಗಾಲುವೆ ಹಾಗೂ ಇನ್ನಿತರ ಕಛೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಿದರು. ಸದರಿ ವೇಳೆ ಮಾನ್ಯ ಉಪ ಮಹಾಪೌರರು, ಸ್ಥಳೀಯ ಪಾಲಿಕೆಸದಸ್ಯರು ಆದ ಮಾನ್ಯ ಎನ್.ನಾಗರಾಜು ರವರು ಹಾಗೂ ಪಾಲಿಕೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮೊದಲಿಗೆ ಜಯನಗರ ಶಾಪಿಂಗ್ ಕಾಂಪ್ಲೆಕ್ಸ್ ಹೊಸ ಕಟ್ಟಡ ನಿರ್ಮಾಣದ ಬಳಿ ದುರಸ್ತಿ ಕಾರ್ಯ ಸರಿಯಾಗಿ ಮಾಡದಿರುವುದು ಹಾಗೂ ಕಾಂಪ್ಲೆಕ್ಸ್ ಮುಂಭಾಗ ಕಸದ ರಾಶಿ ಬಿದ್ದಿರುವುದನ್ನು ಕಂಡು ಸ್ಥಳದಲ್ಲೇ ಸಂಬಂಧಪಟ್ಟ ಅಧಿಕಾರಿಗೆ ದೂರವಾಣಿ ಮೂಲಕ ಕರೆ ಮಾಡಿ ತರಾಟೆಗೆ ತೆಗೆದುಕೊಂಡರು.

ಕಾಂಪ್ಲೆಕ್ಸ್ ಆವರಣದ ಸುತ್ತಲು ಸ್ವಚ್ಛತೆ ಕಾಪಾಡಬೇಕು. ಪ್ಲಾಸ್ಟಿಕ್ ಕವರ್‌ಗಳು ಆವರಣದಲ್ಲಿ ಬೀಳದಂತೆ ನೋಡಿಕೊಳ್ಳಬೇಕು. ವ್ಯಾಪಾರಿಗಳು ಸ್ವಚ್ಛತೆ ಕಾಪಾಡದೇ ಇದ್ದಲ್ಲಿ ಅಂಗಡಿಯವರಿಗೆ ದಂಡ ವಿಧಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ತದನಂತರ ಕಂದಾಯ ಹಾಗೂ ಮಾರುಕಟ್ಟೆ ವಿಭಾಗ, ಆರೋಗ್ಯಾಧಿಕಾರಿ ಕಛೇರಿಗೆ ಭೇಟಿ ನೀಡಿ ಹಾಜರಾತಿ ಪುಸ್ತಕ ಪರಿಶೀಲಿಸಿದರು. ಹಾಜರಾತಿ ಪುಸ್ತಕದಲ್ಲಿ ಬಹುತೇಕ ಸಿಬ್ಬಂದಿ ಸಹಿ ಮಾಡದೇ ಇರುವುದನ್ನು ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಇನ್ನು ಮುಂದೆ ಕಡ್ಡಾಯವಾಗಿ ಹಾಜರಾತಿ ಪುಸ್ತಕದಲ್ಲಿ ಸಹಿ ಹಾಕಬೇಕು. ಇಲ್ಲವಾದರೆ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಸೂಚಿಸಿದರು.

ಬಳಿಕ ಪಾಲಿಕೆ ಬೃಹತ್ ನೀರುಗಾಲುವೆ ವಿಭಾಗದ ಕಛೇರಿಗೆ ಭೇಟಿ ನೀಡಿ ಹಾಜರಾತಿ ಪುಸ್ತಕ ಪರಿಶೀಲಿಸಿದರು. ಈ ವೇಳೆ ಬೃಹತ್ ನೀರುಗಾಲುವೆ ವಿಭಾಗದ ಮುಖ್ಯ ಅಭಿಯಂತರರು ಅಕ್ಟೋಬರ್ ತಿಂಗಳಲ್ಲಿ ಒಂದು ದಿನವೂ ಹಾಜರಾತಿ ಪುಸ್ತಕಕ್ಕೆ ಸಹಿ ಹಾಕದಿರುವುದನ್ನು ಕಂಡು ತೀರ್ವ ಆಕ್ಷೇಪ ವ್ಯಕ್ತಪಡಿಸಿದರು. ಅವರ ಜೊತೆಗೆ ಇನ್ನೂ ಕೆಲ ಸಿಬ್ಬಂದಿ ಸಹಿ ಹಾಕಿರಲಿಲ್ಲ. ಈ ಸಂಬಂಧ ಮ್ಯಾನೇಜರ್ ದಿವ್ಯಶ್ರೀ ಅವರಿಗೆ ಹಾಜಾರಾತಿ ಪುಸ್ತಕದಲ್ಲಿ ಸಹಿ ಹಾಕದೇ ಇರುವವರಿಗೆಲ್ಲಾ ಗೈರು ಹಾಜರಿ ಎಂದು

ನಮೂದಿಸಿ ವೇತನ ಕಡಿತಗೊಳಿಸುವಂತೆ ಸೂಚನೆ ನೀಡಿದರು. ಜೊತೆಗೆ ಪಾಲಿಕೆ ಹಣಕಾಸು ವಿಭಾಗದ ವಿಶೇಷ ಆಯುಕ್ತರು ಲೋಕೇಶ್ ಅವರಿಗೆ ದೂರವಾಣಿ ಮೂಲಕ ಕರೆ ಮಾಡಿ ಹಾಜರಾತಿ ಹಾಕದೇ ಇರುವ ಎಲ್ಲಾ ಸಿಬ್ಬಂದಿಯ ಒಂದು ವಾರದ ವೇತನ ಕಡಿತಗೊಳಿಸುವಂತೆ ಸೂಚಿಸಿದರು.

ಯಾವುದೇ ಸಿಬ್ಬಂದಿಯಾಗಲಿ ಕಛೇರಿ ಬಿಟ್ಟು ಬೇರೆಡೆ ಹೋಗಬೇಕಾದರೆ ಚಲನವಲನ ಪುಸ್ತಕ(Movemet Register)ದಲ್ಲಿ ಯಾವ ಕೆಲಸದಮೇಲೆ ತೆರಳುತ್ತಿದ್ದೇವೆ ಎಂಬ ಮಾಹಿತಿಯನ್ನು ಬರೆದು ತೆರಳಬೇಕು. ಆದರೆ ಚಲನವಲನ ಪುಸ್ತಕದಲ್ಲಿ ಸಮರ್ಪಕವಾಗಿ ಮಾಹಿತಿ ದಾಖಲಿಸದಿರುವುದನ್ನು ಕಂಡು ಅಧಿಕಾರಿಳನ್ನು ತರಾಟೆಗೆ ತೆಗೆದುಕೊಂಡರು. ಇನ್ನುಮುಂದೆ ಚಲನವಲನ ಪುಸ್ತಕದಲ್ಲಿ ಕಡ್ಡಾಯವಾಗಿ ಮಾಹಿತಿ ದಾಖಲಸಬೇಕು ಎಂದು ಸೂಚನೆ ನೀಡಿದರು.

ಜಯನಗರ ಹೊಸ ಕಾಂಪ್ಲೆಕ್ಸ್‌ನ ಕಾರು ನಿಲುಗಡೆ ಮಾಡುವ ಪಾರ್ಕಿಂಗ್ ಸ್ಥಳದಲ್ಲಿ ತಾತ್ಕಾಲಿಕವಾಗಿ ಮಳಿಗೆಗಳನ್ನು ನಿರ್ಮಿಸಲಾಗಿದೆ. ಆದರೆ, ಯಾವೊಂದಕ್ಕೂ ಉದ್ದಿಮೆ ಪರವಾನಗಿ ಪಡೆಯದಿರುವುದನ್ನು ಕಂಡ ಮಹಾಪೌರರು ಈ ಮಳಿಗೆಗಳನ್ನು ನಡೆಸಲು ಅನುಮತಿ ಕೊಟ್ಟವರ್ಯಾರು ಎಂದು ಅಧಿಕಾರಿಯನ್ನು ತರಾಟೆಗೆ ತೆಗೆದುಕೊಂಡರು. ಅಲ್ಲದೆ ಪಾರ್ಕಿಂಗ್ ಸ್ಥಳದಲ್ಲಿ ತಾತ್ಕಾಲಿಕವಾಗಿ ನಿರ್ಮಿಸಿಕೊಂಡಿರುವ ಮಳಿಗೆಗಳಿಗೆ ಬೀಗಮುದ್ರೆ ಜಡಿಯಲು ಸೂಚನೆ ನೀಡಿದರು. ಅನಧಿಕೃತವಾಗಿ ನಿರ್ಮಿಸಿಕೊಂಡಿರುವ ಮಳಿಗೆಗಳನ್ನೆಲ್ಲಾ ಕೂಡಲೆ ತೆರವುಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಈ ವೇಳೆ ಭೈರಸಂದ್ರ ವಾರ್ಡ್ ಸದಸ್ಯರು ಆದ ಎನ್.ನಾಗರಾಜು ರವರು ಪ್ರತಿಕ್ರಿಯಿಸಿ, ಈ ಶಾಪಿಂಗ್ ಕಾಂಪ್ಲೆಕ್ಸ್ ಅನ್ನು ಬಿಡಿಎ ನಿರ್ಮಿಸಿದ್ದು, ಬಿಬಿಎಂಪಿ ವತಿಯಿಂದ ನಿರ್ವಹಣೆ ಮಾಡಲಾಗುತ್ತಿದೆ. ವ್ಯಾಪಾರಸ್ತರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಪಾರ್ಕಿಂಗ್ ಸ್ಥಳದಲ್ಲಿ ತಾತ್ಕಾಲಿಕವಾಗಿ ಮಳಿಗೆಗಳನ್ನು ನಿರ್ಮಿಸಲಾಗಿದೆ. ಕಾರ್ ಪಾರ್ಕಿಂಗ್ ಸ್ಥಳದಲ್ಲಿ ನಿರ್ಮಾಣ ಮಾಡಿರುವ ತಾತ್ಕಾಲಿಕ ಮಳಿಗೆಗಳ್ನನು ತೆರವುಗೊಳಿಸುವಂತೆ ಹೈಕೋರ್ಟ್ ನಿರ್ದೇಶನ ನೀಡಿದೆ. ಹೈಕೋಟ್‌ನಿಂದ ಆದೇಶ ಬಂದ ಕೂಡಲೆ ಎಲ್ಲಾ ತಾತ್ಕಾಲಿಕ ಮಳಿಗೆಗಳನ್ನು ತೆರವುಗೊಳಿಸಿ ಕಾರು ನಿಲುಗಡೆಗೆ ವ್ಯವಸ್ಥೆ ಕಲ್ಪಿಸಲಾಗುವುದು ಎಂದರು.

ತಪಾಸಣೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಮಹಾಪೌರು, ಪಾಲಿಕೆ ಅಧಿಕಾರಿಗಳ ಕಾರ್ಯವೈಖರಿ ಹೇಗಿದೆ ಎಂಬುದನ್ನು ತಿಳಿಯಲು ಇಂದು ಜಯನಗರ ಶಾಪಿಂಗ್ ಕಾಂಪ್ಲೆಕ್ಸ್ ಹಾಗೂ ಕೆಲ ಕಛೇರಿಗಳಿಗೆ ಭೇಟಿ ನೀಡಿ ಅನಿರೀಕ್ಷಿತ ತಪಾಸಣೆ ನಡೆಸಲಾಯಿತು. ಈ ಪೈಕಿ ಸ್ವಚ್ಛತೆ, ಹಾಜರಾತಿ ಪುಸ್ತಕಕ್ಕೆ ಸಹಿ ಹಾಕದೇ ಇರುವುದು, ಚಲನವಲನ ಪುಸ್ತಕದಲ್ಲಿ ಮಾಹಿತಿ ಬರೆಯದೇ ಇರುವುದು ಕಂಡುಬಂದಿದೆ. ಈ ಸಂಬಂಧ ಆಯುಕ್ತರ ಜೊತೆ ಚರ್ಚಿಸಿ ಶಿಸ್ತು ಕ್ರಮ ಕೈಗೊಳ್ಳಲು ಸೂಚಿಸಲಾಗುವುದು ಎಂದು ತಿಳಿಸಿದರು.

ಹಳೆಯ ಕಾಂಪ್ಲೆಕ್ಸ್‌ನಲ್ಲಿ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಲಿಫ್ಟ್ ದುರಸ್ತಿಯಾಗಿದ್ದು, ವ್ಯಾಪಾರಸ್ಥರು ಹಾಗೂ ಗ್ರಾಹಕರಿಗೆ ಮೂಲಸೌಲಭ್ಯ ಕಲ್ಪಿಸಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಜಯನಗರ ಹೊಸ ಶಾಪಿಂಗ್ ಕಾಂಪ್ಲೆಕ್ಸ್‌ನಲ್ಲಿ ವ್ಯಾಪಾರ ಮಾಡುವ ಹಾಗೂ ಪಾರ್ಕಿಂಗ್ ತಾಣದಲ್ಲಿ ಮಳಿಗೆ ನಿರ್ಮಾಣ ಮಾಡಿರುವ ಬಗ್ಗೆ ಪಾಲಿಕೆ ಆಯುಕ್ತರು, ಯೋಜನಾ ವಿಭಾಗದ ವಿಶೇಷ ಆಯುಕ್ತರು, ದಕ್ಷಿಣ ವಲಯ ಹಾಗೂ ಮಾರುಕಟ್ಟೆ ವಿಭಾಗದ ಜಂಟಿ ಆಯುಕ್ತರ ಜೊತೆ ಸಭೆ ನಡೆಸಿ ಶೀಘ್ರ ಸಮಸ್ಯೆ ಬಗೆಹರಿಸಲಾಗುವುದು ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**